ಸೀಐII/ ಶ್ರೀ ಶಾ/ 40202958/ 26-04-22
27/04/2022

ಸಾರ್ವಜನಿಕ ಶಿಕ್ಷಣ ಆಯುಕ್ತರ ಕಛೇರಿ
ಸಂಖ್ಯೆ 70
ದಿನಾಂಕ 26/04/2022
ಬೆಂಗಳೂರು

# <u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ 153 ಸೇನೆನಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 19.04.2022.

## <u>ಅಧಿಸೂಚನೆ</u>

ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣೆ) ನಿಯಮಗಳು, 1977ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಅಧಿನಿಯಮ ಸಂಖ್ಯೆ: 14)ರ 3ನೇ ಪ್ರಕರಣದ 2(ಎ) ಉಪ ಪ್ರಕರಣವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ, ಕರಡು ನಿಯಮಗಳನ್ನು ದಿನಾಂಕ:03.03.2022ರ ರಾಜ್ಯ ಪತ್ರದ ವಿಶೇಷ ಸಂಚಿಕೆಯ ಭಾಗ IV-ಎ(ನಂ-94)ರಲ್ಲಿ ಅಧಿಸೂಚನೆ ಸಂಖ್ಯೆ: ಸಿಆಸುಇ 153 ಸೇನೆನಿ 2020, ದಿನಾಂಕ: 03.03.2022ರಲ್ಲಿ ಪ್ರಕಟಿಸಿ ಅದರಿಂದ ಬಾಧಿತರಾಗಬಹುದಾದಂತಹ ವ್ಯಕ್ತಿಗಳಿಂದ ಅಧಿಕೃತ ರಾಜ್ಯಪತ್ರದಲ್ಲಿ ಆ ಕರಡು ನಿಯಮಗಳು ಪ್ರಕಟವಾದ ದಿನಾಂಕದಿಂದ 15 ದಿನಗಳ ಒಳಗಾಗಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿರುವುದರಿಂದ,

ಸದರಿ ರಾಜ್ಯಪತ್ರವನ್ನು ದಿನಾಂಕ:3ನೇ ಮಾರ್ಚ್ 2022ರಂದು ಸಾರ್ವಜನಿಕರಿಗೆ ದೊರೆಯುವಂತೆ ಮಾಡಲಾಗಿರುವುದರಿಂದ,

ಮತ್ತು ಸದರಿ ಕರಡಿನ ಬಗ್ಗೆ ಯಾವುದೇ ಆಕ್ಷೇಪಣೆಗಳು ಮತ್ತು ಸಲಹೆಗಳು ರಾಜ್ಯ ಸರ್ಕಾರದಲ್ಲಿ ಸ್ವೀಕೃತವಾಗಿಲ್ಲದಿರುವುದರಿಂದ,

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಅಧಿನಿಯಮ ಸಂಖ್ಯೆ: 14)ರ 3ನೇ ಪ್ರಕರಣದ 1ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಗಿನ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## <u>ನಿಯಮಗಳು</u>

ಮುಂ ಕ್ರಮ 07/05/2022

1. **<u>ಶೀರ್ಷಿಕೆ ಮತ್ತು ಪ್ರಾರಂಭ:-</u>** (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) (ತಿದ್ದುಪಡಿ) ನಿಯಮಗಳು, 2022 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **<u>ನಿಯಮ 5ಕ್ಕೆ ತಿದ್ದುಪಡಿ:-</u>** ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) ನಿಯಮಗಳು, 1977ರ ನಿಯಮ 5ರ ಉಪ ನಿಯಮ 2ರ ಕೊನೆಯಲ್ಲಿ ಕೆಳಗಿನ ಪರಂತುಕವನ್ನು ಸೇರಿಸತಕ್ಕದ್ದು,-

..2..

"ಪರಂತು, ಸಂದರ್ಭಾನುಸಾರ, ನೇಮಕಾತಿ ಪ್ರಾಧಿಕಾರವು ಉಪ-ನಿಯಮ (1)ರ ಪ್ರಕರಣ (ಎ) ರನ್ವಯ ಪರಿವೀಕ್ಷಣೆ ಅವಧಿಯನ್ನು ತೃಪ್ತಿಕರವೆಂದು ಘೋಷಿಸುವ ಅಥವಾ ಉಪ-ನಿಯಮ (1)ರ ಪ್ರಕರಣ (ಬಿ)ರನ್ವಯ ಸೇವೆಯಿಂದ ತೆಗೆದುಹಾಕುವ ಅಥವಾ ನಿಯಮ (6)ರನ್ವಯ ಪರಿವೀಕ್ಷಣಾವಧಿಯಲ್ಲಿರುವಾಗಲೇ ಸೇವೆಯಿಂದ ಬಿಡುಗಡೆ ಮಾಡುವ ಆದೇಶವನ್ನು ಹೊರಡಿಸುವ ಮೊದಲೇ ಸರ್ಕಾರಿ ನೌಕರನು ವಯೋನಿವೃತ್ತಿ ವಯಸ್ಸನ್ನು ತಲುಪಿದ ಕಾರಣ ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) (ತಿದ್ದುಪಡಿ) ನಿಯಮಗಳು, 2022 ಜಾರಿಯಾಗುವ ದಿನಾಂಕದಂದು ಅಥವಾ ಮೊದಲು ಅಥವಾ ಜಾರಿಗೊಂಡ ನಂತರ ವಯೋನಿವೃತ್ತಿ ಹೊಂದಿ ಸೇವೆಯಿಂದ ಸ್ಥಗಿತಗೊಂಡಿದ್ದಲ್ಲಿ, ಕೇವಲ ಪಿಂಚಣಿಯ ಉದ್ದೇಶಕ್ಕಾಗಿ ಆತನ ಪರಿವೀಕ್ಷಣಾವಧಿಯನ್ನು ಆತನ ವಯೋನಿವೃತ್ತಿಯ ದಿನಾಂಕದವರೆಗೂ ವಿಸ್ತರಿಸಲಾಗಿದೆ ಮತ್ತು ಆ ದಿನಾಂಕದಂದು ತೃಪ್ತಿಕರವಾಗಿ ಪೂರೈಸಲಾಗಿದೆ ಎಂದು ಘೋಷಿಸಲಾಗಿದೆ ಎಂದು ಪರಿಭಾವಿಸತಕ್ಕದ್ದು.

ಮತ್ತೂ ಪರಂತು, ಸಂದರ್ಭಾನುಸಾರ, ನೇಮಕಾತಿ ಪ್ರಾಧಿಕಾರಗಳು ಉಪ-ನಿಯಮ (1)ರ ಪ್ರಕರಣ (ಎ) ರನ್ವಯ ಪರೀಕ್ಷಾರ್ಥಿಯ ಪರಿವೀಕ್ಷಣೆ ಅವಧಿಯನ್ನು ತೃಪ್ತಿಕರವೆಂದು ಘೋಷಿಸುವ ಅಥವಾ ಉಪ-ನಿಯಮ (1)ರ ಪ್ರಕರಣ (ಬಿ)ರನ್ವಯ ಆತನನ್ನು ಸೇವೆಯಿಂದ ತೆಗೆದುಹಾಕುವ ಅಥವಾ ನಿಯಮ (6)ರನ್ವಯ ಪರಿವೀಕ್ಷಣಾವಧಿಯಲ್ಲಿರುವಾಗಲೇ ಆತನನ್ನು ಸೇವೆಯಿಂದ ಬಿಡುಗಡೆ ಮಾಡುವ ಆದೇಶವನ್ನು ಹೊರಡಿಸುವ ಆದೇಶಗಳನ್ನು ಹೊರಡಿಸುವಲ್ಲಿ ವಿಳಂಬ ಮಾಡತಕ್ಕದ್ದಲ್ಲ. ಈ ಉದ್ದೇಶಕ್ಕಾಗಿ ನೇಮಕಾತಿ ಪ್ರಾಧಿಕಾರಗಳು ಅಂತಹ ಆದೇಶಗಳನ್ನು ಹೊರಡಿಸಲು ಬಾಕಿ ಇರುವ ಪ್ರಕರಣಗಳನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡತಕ್ಕದ್ದು ಹಾಗೂ ಅವುಗಳನ್ನು ಕಾಲಮಿತಿಯಲ್ಲಿ ಹೊರಡಿಸಲು ಕ್ರಮವಹಿಸತಕ್ಕದ್ದು.

ಮತ್ತೂ ಪರಂತು, ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣೆ) (ತಿದ್ದುಪಡಿ) ನಿಯಮಗಳು, 2022 ಪ್ರಾರಂಭವಾದ ದಿನಾಂಕದ ನಂತರ ನೇಮಕಾತಿ ಪ್ರಾಧಿಕಾರವು ಮೊದಲನೆಯ ಮತ್ತು ಎರಡನೆಯ ಪರಂತುಕದಲ್ಲಿನ ಆಸ್ಪದಗಳನ್ನು ಪೂರ್ವ ನಿದರ್ಶನವಾಗಿ ಬಳಸತಕ್ಕದ್ದಲ್ಲ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ವೀರಭದ್ರು 19-4-2022
(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:121:ನಿತಿಬ:2020-21:ಸೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 05.2022

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/153/ಸೇನೆನಿ/2020, ದಿನಾಂಕ:19.04.2022 ನ್ನು ಈ ಕೆಳಕಂಡವರುಗಳ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

30/05/2022
ಮುಖ್ಯ ಆಡಳಿತಾಧಿಕಾರಿಗಳು
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1) ಜಂಟಿ ನಿರ್ದೇಶಕರುಗಳು, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ – ಮಾಹಿತಿಗಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ
3) ಮಾಹಿತಿ ಅಧಿಕಾರಿ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಕಛೇರಿ ಪ್ರತಿ.